ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಗುಬ್ಬಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಮಾರನಕಟ್ಟೆ ಜಾಗದ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ(ಪದವೀಧರರ ಕ್ಷೇತ್ರ):-

492 (773) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕಿನ ಗುಬ್ಬಿ ಪಟ್ಟಣ ಪಂಚಾಯಿತಿ ಯಾವ ದಿನಾಂಕದಿಂದ ಅಸ್ತಿತ್ವಕ್ಕೆ ಬಂದಿದೆ; ವಾರ್ಡ್‌ಗಳ ಸಂಖ್ಯೆ ಎಷ್ಟು; ಅವು ಯಾವುವು; ಪಂಚಾಯಿತಿ ಸರಹದ್ದು ಎಲ್ಲಿಯವರೆಗೆ ಇದೆ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮಾರನಕಟ್ಟೆಯು ಇದೆಯೇ; ಹಾಗಾದಲ್ಲಿ, ಇದರ ವಿಸ್ತೀರ್ಣ ಎಷ್ಟು; ಮಾರನಕಟ್ಟೆಯ ಮಾಲೀಕರು ಯಾರು; (ವಿವರವಾದ ಮಾಹಿತಿ ನೀಡುವುದು)

(ಇ) ಮಾರನಕಟ್ಟೆಯ ಜಾಗದಲ್ಲಿ ಇಲ್ಲಿಯವರೆಗೆ ಯಾವ ಯಾವ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳಿಗೆ ಜಮೀನನ್ನು ಮಂಜೂರು ಮಾಡಲಾಗಿದೆ; ಹಾಲಿ ಖಾಲಿಯಿರುವುದು ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಈ) ಗುಬ್ಬಿ ಸರ್ಕಾರಿ ಬಸ್ ನಿಲ್ದಾಣದಿಂದ ಮಾರನಕಟ್ಟೆ ಪಕ್ಕದಲ್ಲಿ ಉತ್ತಮ ರಸ್ತೆ ನಿರ್ಮಿಸಲು ಪಟ್ಟಣ ಪಂಚಾಯಿತಿಯ ಸಿ.ಡಿ.ಪಿ ಯಲ್ಲಿ ಸೇರಿಸಲಾಗಿದೆಯೇ? (ವಿವರವಾದ ಮಾಹಿತಿ ನೀಡುವುದು)